## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಶ್ರೀ ಹೆಚ್.ಎನ್.ಶಿವಶಂಕರ, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಮತ್ತು ಶ್ರೀ ಏಜಾಜ್ ಅಹಮ್ಮದ್ ಸಿದ್ಧಿಕಿ, ಅಂದಿನ ಸಹಾಯಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ನಾಗಮಂಗಲ ಇವರ ಅಮಾನತ್ತಿನ ಅವಧಿಯನ್ನು ಕರ್ತವ್ಯದ ಅವಧಿಯೆಂದು ಪರಿಗಣಿಸುವ ಬಗ್ಗೆ – ಆದೇಶ.

**ಓದಲಾಗಿದೆ.**

1. ಸರ್ಕಾರದ ಆದೇಶ ಸಂಖ್ಯೆ. ಗ್ರಾಅಪ 93 ಜಿಪಅ 2009, ದಿನಾಂಕ. 02-07-2009
2. ಸರ್ಕಾರದ ಆದೇಶ ಸಂಖ್ಯೆ. ಗ್ರಾಅಪ 93 ಜಿಪಅ 2009, ದಿನಾಂಕ. 17-03-2010.
3. ಸರ್ಕಾರದ ಆದೇಶ ಸಂಖ್ಯೆ. ಗ್ರಾಅಪ 93 ಜಿಪಅ 2009, ದಿನಾಂಕ. 02-12-2011.
4. ಶ್ರೀ ಹೆಚ್.ಎನ್.ಶಿವಶಂಕರ, ಸಹಾಯಕ ಕಾರ್ಯಪಾಲಕ ಇಂಜಿನಿಯರ್ (ನಿವೃತ್ತ) ಇವರ ಮನವಿ ದಿನಾಂಕ. 21-03-2012.

**ಪ್ರಸ್ತಾವನೆ:**

ಶ್ರೀ ಹೆಚ್.ಎನ್.ಶಿವಶಂಕರ, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಹಾಗೂ ಶ್ರೀ ಏಜಾಜ್ ಅಹಮ್ಮದ್ ಸಿದ್ಧಿಕಿ, ಸಹಾಯಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ನಾಗಮಂಗಲ ಇವರುಗಳು ಸರ್ಕಾರದಿಂದ ಬಿಡುಗಡೆಯಾದ ಅನುದಾನದಡಿ ರಸ್ತೆಗಳನ್ನು ಅಭಿವೃದ್ಧಿಪಡಿಸದೇ ಬೇರೆ ಇನ್ನಿತರ ಯೋಜನೆಯಡಿ ಅಭಿವೃದ್ಧಿಪಡಿಸಿದ ರಸ್ತೆಗಳನ್ನೇ ತೋರಿಸಿ ಬಿಲ್ಲುಗಳನ್ನು ಪಾವತಿಸಿ ಕರ್ತವ್ಯಲೋಪವೆಸಗಿರುವುದು ಮೇಲ್ನೋಟಕ್ಕೆ ಸಾಬೀತಾಗಿರುವುದರಿಂದ ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ದಿನಾಂಕ. 02-07-2009ರ ಸರ್ಕಾರದ ಆದೇಶದಲ್ಲಿ ಇವರುಗಳನ್ನು ಇಲಾಖಾ ವಿಚಾರಣೆಯನ್ನು ಬಾಕಿಯಿಟ್ಟು ಸೇವೆಯಿಂದ ಅಮಾನತ್ತುಗೊಳಿಸಲಾಗಿತ್ತು. ನಂತರ ಮೇಲೆ ಕ್ರಮ ಸಂಖ್ಯೆ (2)ರಲ್ಲಿ ಓದಲಾದ ದಿನಾಂಕ. 17-03-2010ರ ಸರ್ಕಾರದ ಆದೇಶದಲ್ಲಿ ಸದರಿ ಆಪಾದಿತ ಅಧಿಕಾರಿಗಳ ವಿರುದ್ಧದ ಇಲಾಖಾ ವಿಚಾರಣೆಯನ್ನು ಬಾಕಿಯಿಟ್ಟು ಅಮಾನತ್ತನ್ನು ತೆರುವುಗೊಳಿಸಲಾಗಿತ್ತು.

ಶ್ರೀ ಹೆಚ್.ಎನ್.ಶಿವಶಂಕರ, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಹಾಗೂ ಶ್ರೀ ಏಜಾಜ್ ಅಹಮ್ಮದ್ ಸಿದ್ಧಿಕಿ, ಸಹಾಯಕ ಇಂಜಿನಿಯರ್ ಮತ್ತು ಶ್ರೀ ಗೌಡರಾಮನಂಜಪ್ಪ, ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ನಾಗಮಂಗಲ ಇವರುಗಳ ವಿರುದ್ಧ ಮಾಡಲಾದ ಆರೋಪಗಳು ಇಲಾಖಾ ವಿಚಾರಣೆಯಲ್ಲಿ ಸಾಬೀತಾಗಿಲ್ಲದ ಕಾರಣ ಮೇಲೆ ಕ್ರಮ ಸಂಖ್ಯೆ. (3)ರಲ್ಲಿ ಓದಲಾದ ದಿನಾಂಕ. 02-12-2011ರ ಸರ್ಕಾರದ ಆದೇಶದಲ್ಲಿ ಸದರಿಯವರುಗಳನ್ನು ಆರೋಪಗಳಿಂದ ದೋಷಮುಕ್ತಗೊಳಿಸಲಾಗಿದೆ.

ಶ್ರೀ ಹೆಚ್.ಎನ್.ಶಿವಶಂಕರ, ಸಹಾಯಕ ಕಾರ್ಯಪಾಲಕ ಇಂಜಿನಿಯರ್‌ರವರು ದಿನಾಂಕ. 2-12-2012ರ ಸರ್ಕಾರದ ಆದೇಶದಲ್ಲಿ ಅವರನ್ನು ಆರೋಪಗಳಿಂದ ದೋಷಮುಕ್ತಮಾಡಿರುವುದರಿಂದ , ದಿನಾಂಕ. 2-7-2009 ರಿಂದ 17-03-2010 ರವರೆಗಿನ ಅಮಾನತ್ತಿನ ಅವಧಿಯನ್ನು ಕರ್ತವ್ಯದ ಅವಧಿಯೆಂದು ಪರಿಗಣಿಸಲು ಮೇಲೆ ಕ್ರಮ ಸಂಖ್ಯೆ. (4)ರಲ್ಲಿ ಓದಲಾದ ದಿನಾಂಕ. 21-03-2012ರ ಮನವಿಯಲ್ಲಿ ಕೋರಿರುತ್ತಾರೆ.

ಮೇಲ್ಕಂಡ ಎಲ್ಲಾ ಅಂಶಗಳನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ, ಕೆಳಕಂಡಂತೆ ಆದೇಶಿಸಿದೆ.

<u>ಆದೇಶ ಸಂಖ್ಯೆ ಗ್ರಾಅಪ 93 ಜಿಪಅ 2009 ಬೆಂಗಳೂರು, ದಿನಾಂಕ. 25-04-2012</u>

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ, ಶ್ರೀ ಹೆಚ್.ಎನ್. ಶಿವಶಂಕರ, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಮತ್ತು ಶ್ರೀ ಏಜಾಜ್ ಅಹಮ್ಮದ್ ಸಿದ್ಧಿಕಿ, ಅಂದಿನ ಸಹಾಯಕ ಇಂಜಿನಿಯರ್ ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ನಾಗಮಂಗಲ ಇವರುಗಳು ದಿನಾಂಕ. 02-07-2009 ರಿಂದ 17-03-2010 ರವರೆಗೆ (ಎರಡೂ ದಿನಗಳು ಸೇರಿ) ಅಮಾನತ್ತಿನಲ್ಲಿ ಕಳೆದ ಅವಧಿಯನ್ನು ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳ ನಿಯಮ 100 (3) ರನ್ವಯ ಕರ್ತವ್ಯದ ಅವಧಿಯೆಂದು ಪರಿಗಣಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

25/4/2012

(ಎನ್.ವೈ.ಸಾಗರ),
ಸರ್ಕಾರದ ಅಧೀನ ಕಾರ್ಯದರ್ಶಿ (ಸೇವೆಗಳು-ಎ),
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಇವರಿಗೆ:

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು (ಲೆಕ್ಕ ಪತ್ರ 1 & 2) / (ಆಡಿಟ್)
2. ಸರ್ಕಾರಕ ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ / ಜಲಸಂಪನ್ಮೂಲ ಇಲಾಖೆ/ ಸಣ್ಣ ನೀರಾವರಿ ಇಲಾಖೆ.
3. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ರಿಸಾಲ್ದಾರ್ ರಸ್ತೆ, ಶೇಷಾದ್ರಿಪುರಂ, ಬೆಂಗಳೂರು,
4. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು (ದಕ್ಷಿಣ), ಕೆ.ಆರ್.ಸರ್ಕಲ್, ಬೆಂಗಳೂರು.
5. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಮಂಡ್ಯ.
6. ಶ್ರೀ ಹೆಚ್.ಎನ್.ಶಿವಶಂಕರ, ಸಹಾಯಕ ಕಾರ್ಯಪಾಲಕ ಇಂಜಿನಿಯರ್ (ನಿವೃತ್ತ), ಶ್ವೇತ ನಿಲಯ, ನಂ.23, 11ನೇ ಬ್ಲಾಕ್, 7ನೇ ಕ್ರಾಸ್, 4ನೇ ಮೈನ್, ಆದಿಶಕ್ತಿರೋಡ್, ಶಕ್ತಿನಗರ, ಮೈಸೂರು-19
7. ಶ್ರೀ ಏಜಾಜ್ ಅಹಮ್ಮದ್ ಸಿದ್ಧಿಕಿ, ಸಹಾಯಕ ಇಂಜಿನಿಯರ್ ಇವರಿಗೆ – ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಮಂಡ್ಯ ಇವರ ಮುಖಾಂತರ
8. ಸರ್ಕಾರದ ಅಧೀನ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ, (ಸೇವೆಗಳು-ಎ) / (ಸೇವೆಗಳು-ಸಿ)
9. ಗ್ರಾ.ಅ.ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರಿಗೆ.
10. ಗ್ರಾ.ಅ.ಪಂ.ಇಲಾಖೆಯ ಸರ್ಕಾರದ ಪ್ರದಾನ ಕಾರ್ಯದರ್ಶಿ / ಕಾರ್ಯದರ್ಶಿ/ ಉಪ ಕಾರ್ಯದರ್ಶಿ ಇವರುಗಳ ಅಪ್ತ ಕಾರ್ಯದರ್ಶಿ / ಆಪ್ತ ಸಹಾಯಕರಿಗೆ.
11. ರಕ್ಷಾ ಕಡತ / ಮಾಹಿತಿ ಕೇಂದ್ರ/ ಹೆಚ್ಚುವರಿ ಪ್ರತಿಗಳು.